# ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
# KARNATAKA LEGISLATIVE ASSEMBLY, RESEARCH AND REFERENCE BRANCH

## ಪತ್ರಿಕಾ ತುಣುಕುಗಳು
## PAPER CLIPPINGS

15

ಇಲಾಖೆ / ವಿಷಯ : DEPARTMENT / SUBJECT: ಕೋವಿಡ್-19 - ಕರ್ನಾಟಕ ವಿಧಾನ ಸಭೆ ಸದಸ್ಯರು

ಪತ್ರಿಕೆಯ ಹೆಸರು : NAME OF THE NEWS PAPER: ಸಂಯುಕ್ತ ಕರ್ನಾಟಕ    ದಿನಾಂಕ : DATE : 17/9/2020

## ಹ್ಯಾರಿಸ್‌ಗೆ ಕೊರೊನಾ ಸಿದ್ದುಗೆ ಗಾಬರಿ

ಬೆಂಗಳೂರು: ಕಾಂಗ್ರೆಸ್ ಪಕ್ಷದ ಶಾಸಕಾಂಗ ಸಭೆಯಲ್ಲಿ ಶಾಸಕ ಹ್ಯಾರಿಸ್ ಮಾತು ಕೇಳಿ ವಿಧಾನಸಭೆ ಪ್ರತಿಪಕ್ಷದ ನಾಯಕ ಸಿದ್ದರಾಮಯ್ಯ ಬೆಚ್ಚಿಬಿದ್ದಿರುವ ಪ್ರಸಂಗ ನಡೆದಿದೆ. ಶಿರಾ ಉಪ ಚುನಾವಣೆಗೆ ಪಕ್ಷದ ಅಭ್ಯರ್ಥಿ ಆಯ್ಕೆ ಹಾಗೂ ಅಧಿವೇಶನದ ಸಂದರ್ಭದಲ್ಲಿ ಕೈಗೊಳ್ಳಬೇಕಾದ ನಿಲುವುಗಳ ಕುರಿತಂತೆ ಕೆಪಿಸಿಸಿ ಕಚೇರಿಯಲ್ಲಿ ಶಾಸಕಾಂಗ ಪಕ್ಷದ ಕಚೇರಿಯಲ್ಲಿ ಸಭೆ ನಡೆಯಿತು. ಈ ವೇಳೆ ಶಾಸಕ ಹ್ಯಾರಿಸ್ ಕೊರೊನಾ ಪರೀಕ್ಷೆ ಮಾಡಿಸಿಕೊಂಡು ಸಭೆಗೆ ಹಾಜರಾಗಿದ್ದರು. ಮಧ್ಯಾಹ್ನದ ನಂತರ ಹ್ಯಾರಿಸ್‌ಗೆ ಕೊರೊನಾ ಪಾಸಿಟಿವ್ ಸಂದೇಶ ಬಂದಿತ್ತು. ಅದನ್ನು ನೋಡಿದ ಹ್ಯಾರಿಸ್ ಅವರು 'ನನಗೆ ಕೊರೊನಾ ಬಂದಿದೆ. ನಾನು ಸಭೆಯಿಂದ ತೆರಳುತ್ತೇನೆ' ಎಂದು ಹೊರಗೆ ಹೋಗಿದ್ದಾರೆ. ಇದನ್ನು ಕೇಳಿದ ಸಿದ್ದರಾಮಯ್ಯ ಅವರು ಬೆಚ್ಚಿಬಿದ್ದಿದ್ದಾರೆ. ಸಭೆ ಆರಂಭದಲ್ಲಿ ಹ್ಯಾರಿಸ್ ಅವರು ಸಿದ್ದರಾಮಯ್ಯ ಅವರ ಕಿವಿಯಲ್ಲಿ ಏನೂ ಉಸುರಿದ್ದರು. ಈ ಹಿನ್ನೆಲೆಯಲ್ಲಿ ಅಯ್ಯೋ ಇವನಾ, ನನ್ನ ಬಳಿ ಬಂದು ಏನೋ ಮಾತನಾಡಿದನಲ್ಲ. ಏ ಕಷಾಯ ತರಿಸು, ಮಾತ್ರೆ ಇರಬೇಕು ಅದನ್ನೂ ತರಿಸು ಎಂದು ಶಾಸಕ ಬೈರತಿ ಸುರೇಶ್‌ಗೆ ಹೇಳಿದ್ದಾರೆ.